## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | :: | 266(280) |
| ಸದಸ್ಯರ ಹೆಸರು | :: | ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | :: | 18.08.2026 (ವರ್ಗಾವಣೆಗೊಂಡಿರುವ) |
| ಉತ್ತರಿಸುವ ಸಚಿವರು | :: | ಉಪ ಮುಖ್ಯಮಂತ್ರಿಯವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬಳ್ಳಾರಿ ನಗರದ ಡಾ.ರಾಜ್ ಕುಮಾರ್ ಉದ್ಯಾನವನ ಪಾಳು ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಳ್ಳಾರಿ ನಗರದ ಡಾ. ರಾಜ್‌ಕುಮಾರ್ ಉದ್ಯಾನವನವನ್ನು ಪ್ರತಿ ನಿತ್ಯ ಹೊರಗುತ್ತಿಗೆ ನೌಕರರ ಮುಖಾಂತರ ಸ್ವಚ್ಛಗೊಳಿಸಿ ನಿರ್ವಹಣೆ ಮಾಡಲಾಗುತ್ತಿದೆ ಹಾಗೂ ಉದ್ಯಾನವನದ ಸೌಂದರ್ಯೀಕರಣಕ್ಕಾಗಿ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಅನೇಕ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. |
| ಆ) | ಬಳ್ಳಾರಿ ನಗರದ ಡಾ.ರಾಜ್ ಕುಮಾರ್ ಉದ್ಯಾನವನದಲ್ಲಿ ಅನೈತಿಕ ಚಟುವಟಿಕೆಗಳು ನಡೆಯುತ್ತಿದ್ದು, ಇದರಿಂದಾಗಿ ಸಾರ್ವಜನಿಕರ ಆಗಮನ ಕಡಿಮೆಯಾಗಿ ಉದ್ಯಾನವನದ ಆದಾಯದಲ್ಲಿ ಕಡಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಉದ್ಯಾನವನದ ವಿವಿಧ ಸ್ಥಳಗಳಲ್ಲಿ ಸಿ.ಸಿ. ಟಿ.ವಿ. ಗಳನ್ನು ಅಳವಡಿಸಲಾಗಿದ್ದು, ಗೃಹ ರಕ್ಷಕ ದಳದ ಇಬ್ಬರು ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. |
| ಇ) | ಬಳ್ಳಾರಿ ನಗರದ ಡಾ.ರಾಜ್ ಕುಮಾರ್ ಉದ್ಯಾನವನವನ್ನು ಅಭಿವೃದ್ಧಿಪಡಿಸಲು ಹಾಗೂ ಸೂಕ್ತ ಭದ್ರತೆ ಮತ್ತು ಅನೈತಿಕ ಚಟುವಟಿಕೆಗೆ ಕಡಿವಾಣ ಹಾಕಲು ಸರ್ಕಾರದಿಂದ ಯಾವ ಕ್ರಮ ಜರುಗಿಸಲಾಗುವುದು | ಬಳ್ಳಾರಿ ನಗರದ ಡಾ.ರಾಜ್‌ಕುಮಾರ್ ಉದ್ಯಾನವನವನ್ನು ಅಭಿವೃದ್ದಿಪಡಿಸಲು ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಅನೇಕ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಭದ್ರತೆ ಕಾಪಾಡಲು ಮತ್ತು ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಗೃಹ ರಕ್ಷಕದಳದ ಇಬ್ಬರು ಸಿಬ್ಬಂದಿಗಳನ್ನು ನಿಯೋಜಿಸಿದ್ದು, ಸದರಿ ಸಿಬ್ಬಂದಿಗಳು ಉದ್ಯಾನವನದಲ್ಲಿ ಗಸ್ತು ಕಾರ್ಯ ಮಾಡುತ್ತಿರುತ್ತಾರೆ. |

**(ಕಡತ ಸಂಖ್ಯೆ:ಆರ್‌ಡಿ 108 ಎಲ್‌ಜಿಇ 2026)**

(ಡಾ.ಜಿ.ಪರಮೇಶ್ವರ)
ಉಪ ಮುಖ್ಯಮಂತ್ರಿ



ile No. RD/108/LGE/2026-SO LG3-REVENUE DEPATMENT SEC (Computer No. 2269465)